# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 656 |
| ಉತ್ತರಿಸಬೇಕಾದ ದಿನಾಂಕ | : | 17.09.2021. |
| ಸದಸ್ಯರ ಹೆಸರು | : | ಶ್ರೀ ಕೆ. ಹರೀಶ್ ಕುಮಾರ್<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರಾವಳಿ ಅವಿಭಾಜಿತ ದಕ್ಷಿಣ ಕನ್ನಡ ಜಿಲ್ಲೆಯ ಕಂಬಳ ಕ್ರೀಡಾ ಕ್ಷೇತ್ರಕ್ಕೆ ರಾಜ್ಯ ಸರ್ಕಾರವು ನೀಡುವ ಪುರಸ್ಕಾರ/ ರಾಜ್ಯ ಪ್ರಶಸ್ತಿಗೆ ಅರ್ಹ ವ್ಯಕ್ತಿಗಳನ್ನು ಆಯ್ಕೆ ಮಾಡುವ ಸಲಹಾ ಸಮಿತಿಯ ಸದಸ್ಯರನ್ನು ನೇಮಕಾತಿಗೆ ಆಯ್ಕೆ ಮಾಡಲು ಇರುವ ಮಾನದಂಡಗಳೇನು? | ಕರ್ನಾಟಕ ಸರ್ಕಾರವು ರಾಜ್ಯದ ಗ್ರಾಮೀಣ ಮತ್ತು ಜಾನಪದ ಕ್ರೀಡೆಗಳಾದ ಕಂಬಳ, ಕುಸ್ತಿ, ಆಟ್ಯಾ-ಪಾಟ್ಯಾ ಇತ್ಯಾದಿ ಕ್ರೀಡೆಗಳು ಮತ್ತು ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿಯನ್ನು ನೀಡುತ್ತಿದ್ದು, ಸದರಿ ಕ್ರೀಡಾ ಪ್ರಶಸ್ತಿಗೆ ಕ್ರೀಡಾಪಟುಗಳನ್ನು ಆಯ್ಕೆ ಮಾಡುವ ಸಂಬಂಧ ಗ್ರಾಮೀಣ ಮತ್ತು ಜಾನಪದ ಕ್ರೀಡೆಗಳಲ್ಲಿ ಪರಿಣತಿ ಹೊಂದಿರುವವರನ್ನು ಒಳಗೊಂಡಂತೆ ಪರಿಶೀಲನಾ ಸಮಿತಿ ಮತ್ತು ಆಯ್ಕೆ ಸಮಿತಿಗಳನ್ನು ಸರ್ಕಾರವು ರಚಿಸಿರುತ್ತದೆ. |
| ಆ) | ಸದಸ್ಯರ ಅಧಿಕಾರದ ಕಾಲಾವಧಿ ಎಷ್ಟು; ಪುನರಾಯ್ಕೆಗೆ ಅವಕಾಶವಿದೆಯೇ; ಇದ್ದಲ್ಲಿ, ಎಷ್ಟು ಬಾರಿ ಪುನರಾಯ್ಕೆಯಾಗಬಹುದು; (ಸಂಪೂರ್ಣ ವಿವರ ಒದಗಿಸುವುದು) | ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿಗೆ ಕ್ರೀಡಾಪಟುಗಳನ್ನು ಆಯ್ಕೆ ಮಾಡುವ ಸಂಬಂಧ ಪರಿಶೀಲನಾ ಸಮಿತಿ ಮತ್ತು ಆಯ್ಕೆ ಸಮಿತಿ ಸದಸ್ಯರನ್ನು ಎರಡು ವರ್ಷಗಳ ಕಾಲಾವಧಿಗೆ ಸರ್ಕಾರವು ನೇಮಿಸಿರುತ್ತದೆ. ಸದರಿ ಸಮಿತಿಗಳಿಗೆ ಸದಸ್ಯರ ನೇಮಕವು ಸರ್ಕಾರದ ವಿವೇಚನೆಗೆ ಒಳಪಟ್ಟಿದ್ದು, ಪುನರಾಯ್ಕೆಗೆ ಯಾವುದೇ ನಿರ್ಬಂಧ ಇರುವುದಿಲ್ಲ. |
| ಇ) | ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಕಂಬಳ ಸಲಹಾ ಸಮಿತಿಯ ಸದಸ್ಯರ ಅಧಿಕಾರವಧಿ ಸೇರಿದಂತೆ ಸಂಪೂರ್ಣ ಮಾಹಿತಿ ಒದಗಿಸುವುದು; | ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಕಂಬಳ ಸಲಹಾ ಸಮಿತಿಯನ್ನು ರಚಿಸಿರುವುದಿಲ್ಲ.<br>ಸರ್ಕಾರದ ಆದೇಶ ಸಂಖ್ಯೆ:ವೈಎಸ್‌ಡಿ/ಇವೈಡಬ್ಲ್ಯೂ/59/2021; ದಿನಾಂಕ: 06-05-2021 ರನ್ವಯ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಗೆ ಸಂಬಂಧಿಸಿದಂತೆ, ಪರಿಶೀಲನಾ ಸಮಿತಿ ಹಾಗೂ ಆಯ್ಕೆ ಸಮಿತಿಗಳನ್ನು ರಚಿಸಲಾಗಿದ್ದು, ಸದರಿ ಸಮಿತಿಗಳಲ್ಲಿನ ಅಧಿಕಾರೇತರ ಸದಸ್ಯರ ಅವಧಿಯು ಎರಡು ವರ್ಷ ಮಾತ್ರ ಆಗಿರುತ್ತದೆ. |

| | | |
|---|---|---|
| ಈ) | ಕಂಬಳ ಸಲಹಾ ಸಮಿತಿಯಲ್ಲಿ ಎರಡು ಬಾರಿಗಿಂತ ಹೆಚ್ಚಿನ ಅವಧಿಗೆ ಸಲಹಾ ಸಮಿತಿ ಸದಸ್ಯರಾಗಿ ನೇಮಕಗೊಂಡಿರುತ್ತಾರೆಯೇ? (ಅಂತಹವರ ಸಲಹಾ ಸಮಿತಿ ಸದಸ್ಯರ ಹೆಸರು ಮತ್ತು ವಿವರ ನೀಡುವುದು) | ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಕಂಬಳ ಸಲಹಾ ಸಮಿತಿಯನ್ನು ರಚಿಸದೇ ಇರುವ ಹಿನ್ನೆಲೆಯಲ್ಲಿ ಸದರಿ ಪ್ರಶ್ನೆಯು ಉದ್ಭವಿಸುವುದಿಲ್ಲ. |

**ವೈಎಸ್‌ಡಿ/ಇಬಿಬಿ/131/2021**

**(ಡಾ. ನಾರಾಯಣಗೌಡ)**
ರೇಷ್ಮೆ, ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು.